# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **2722** |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 28-03-2022 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಬುರ್ಗಿ ಜಿಲ್ಲೆಯ ಫಿರೋಜಾಬಾದ್‌ನಲ್ಲಿ ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್‌ನ ಒಡೆತನದಲ್ಲಿ ಎಷ್ಟು ಮೆಗಾವ್ಯಾಟ್ ಸಾಮರ್ಥ್ಯದ ಸೋಲಾರ್ ಪಾರ್ಕ್‌ನಲ್ಲಿ ವಿದ್ಯುತ್‌ನ್ನು ಉತ್ಪಾದನೆ ಮಾಡಲಾಗುತ್ತಿದೆ; | ಅಫಜಲಪುರ ಮತ ಕ್ಷೇತ್ರದ ವ್ಯಾಪ್ತಿಗೆ ಬರುವ ಕಲಬುರಗಿ ತಾಲ್ಲೂಕಿನ ಫರಹತಾಬಾದ್ ಹೋಬಳಿಯ ನದಿಸಿನ್ನೂರು, ಕಿರಣಗಿ ಮತ್ತು ಫಿರೋಜಾಬಾದ್ ಗ್ರಾಮಗಳ ವ್ಯಾಪ್ತಿಯಲ್ಲಿ ಉದ್ದೇಶಿತ ಶಾಖೋತ್ಪನ್ನ ವಿದ್ಯುತ್ ಘಟಕ ಸ್ಥಾಪನೆ ಮಾಡಲು 1601 ಎಕರೆ 13 ಗುಂಟೆ ಜಮೀನನ್ನು ಕಲಬುರಗಿ ಜಿಲ್ಲಾಧಿಕಾರಿಗಳ ಮೂಲಕ ಕರ್ನಾಟಕ ಸರ್ಕಾರದ ನಿರ್ದೇಶನದಂತೆ ಪವರ್ ಕಂಪನಿ ಆಫ್ ಕರ್ನಾಟಕ ಕಂಪನಿಯಿಂದ ಭೂಸ್ವಾಧೀನ ಮಾಡಿಕೊಳ್ಳಲಾಗಿದೆ. ಈ ಭೂಸ್ವಾಧೀನ ಪ್ರಕ್ರಿಯೆಯನ್ನು 2010-11 ನೇ ಸಾಲಿನಲ್ಲಿ ಭೂಸ್ವಾಧೀನ ಕಾಯ್ದೆ 1894 ಪ್ರಕಾರ ಮಾಡಿಕೊಳ್ಳಲಾಗಿರುತ್ತದೆ.<br><br>ಸದರಿ ಜಮೀನುಗಳಿಗೆ 2010ನೇ ಇಸವಿಯಲ್ಲಿ ಜಿಲ್ಲಾಧಿಕಾರಿಗಳು ನಿಗದಿ ಪಡಿಸಿದ ಭೂ-ಪರಿಹಾರವನ್ನು ನೀಡಲಾಗಿದೆ.<br><br>ಕಲ್ಬುರ್ಗಿ ಜಿಲ್ಲೆಯ ಫಿರೋಜಾಬಾದ್‌ನಲ್ಲಿ ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್‌ನ ಒಡೆತನದಲ್ಲಿರುವ ಜಮೀನನ್ನು ಕ್ರೆಡೆಲ್‌ಗೆ ಗುತ್ತಿಗೆ ಆಧಾರದಲ್ಲಿ ಹಸ್ತಾಂತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುತ್ತದೆ ಹಾಗೂ ಈ ಸ್ಥಳದಲ್ಲಿ 500MW ಸಾಮರ್ಥ್ಯದ ಸೋಲಾರ್ ಪಾರ್ಕ್‌ನ್ನು ಕ್ರೆಡೆಲ್‌ರವರು ನಿರ್ಮಿಸಲು ಆರ್ಥಿಕ ವರ್ಷ 2021-22ನೇ ರಾಜ್ಯದ ಬಜೆಟ್‌ನಲ್ಲಿ ಅನುಮೋದಿಸಲಾಗಿದೆ.<br><br>ಕಲ್ಬುರ್ಗಿ ಜಿಲ್ಲೆಯ ಫಿರೋಜಾಬಾದ್ ನಲ್ಲಿ ಸೋಲಾರ್ ಪಾರ್ಕನ್ನು ಇನ್ನು ಸ್ಥಾಪಿಸಿರುವುದಿಲ್ಲ. ಹಾಗಾಗಿ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿಲ್ಲ. ಸದರಿ ಪ್ರಸ್ತಾವನೆಯು ಸ್ಥಾಪಿಸುವ ಪರಿಗಣನೆಯಲ್ಲಿರುತ್ತದೆ. |
| ಆ) | ಸದರಿ ಕಂಪನಿಯಿಂದ ಸರ್ಕಾರವು ಯಾವ ದರದಲ್ಲಿ ವಿದ್ಯುತ್‌ನ್ನು ಖರೀದಿ ಮಾಡಲಾಗಿರುತ್ತದೆ; | |
| ಇ) | ಸದರಿ ಕಂಪನಿಯಿಂದ ಸ್ಥಳೀಯರಿಗೆ ಎಷ್ಟು ಉದ್ಯೋಗವನ್ನು ಕಲ್ಪಿಸಲಾಗಿದೆ; ಈ ಕಂಪನಿ ಒಡೆತನದಲ್ಲಿರುವ ಜಮೀನು ಎಷ್ಟು? (ವಿವರ ಒದಗಿಸುವುದು) | |

ಸಂಖ್ಯೆ: ಎನರ್ಜಿ 89 ಇಬಿಎಸ್ 2022

(ವಿ ಸುನೀಲ್ ಕುಮಾರ್)
ಮಾನ್ಯ ಇಂಧನ ಹಾಗೂ ಕನ್ನಡ
ಮತ್ತು ಸಂಸ್ಕೃತಿ ಸಚಿವರು